ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 ದಿನಾಂಕ : 20–10–2020

# ಮಾಧ್ಯಮ ಆಮಂತ್ರಣ

**ಪೊಲೀಸ್ ಸಂಸ್ಮರಣ ದಿನಾಚರಣೆ:**

ಮುಖ್ಯ ಅತಿಥಿಗಳು : ಬಿ.ಎಸ್. ಯಡಿಯೂರಪ್ಪ, ಮುಖ್ಯಮಂತ್ರಿಗಳು

ಅಧ್ಯಕ್ಷತೆ : ಬಸವರಾಜ ಬೊಮ್ಮಾಯಿ, ಗೃಹ ಸಚಿವರು

ದಿನಾಂಕ : 21–10–2020 (ಬುಧವಾರ ), ಸಮಯ : ಬೆಳಿಗ್ಗೆ 8 ಗಂಟೆಗೆ

ಸ್ಥಳ : ನಗರ ಸಶಸ್ತ್ರ ಮೀಸಲು ಪಡೆ, ಕೇಂದ್ರ ಸ್ಥಾನದ ಹುತಾತ್ಮರ ಉದ್ಯಾನವನ, ಮೈಸೂರು ರಸ್ತೆ, ಬೆಂಗಳೂರು

# ಪತ್ರಿಕಾ ಪ್ರಕಟಣೆ

## ಕರ್ನಾಟಕದ ಮುಖ್ಯ ಚುನಾವಣಾಧಿಕಾರಿಗಳು ಸಂಜೀವ್ ಕುಮಾರ್ ಅವರಿಗೆ ಡಾಕ್ಟರೇಟ್

ಬೆಂಗಳೂರು, ಅಕ್ಟೋಬರ್ 20 (ಕರ್ನಾಟಕ ವಾರ್ತೆ): ಕರ್ನಾಟಕ ಮುಖ್ಯ ಚುನಾವಣಾಧಿಕಾರಿ ಸಂಜೀವ್ ಕುಮಾರ್ ಅವರು ಮಂಡಿಸಿದ ಮಹಾಪ್ರಬಂಧಕ್ಕೆ ಮೈಸೂರು ವಿಶ್ವವಿದ್ಯಾನಿಲಯ ಡಾಕ್ಟರೇಟ್ ನೀಡಿ ಗೌರವಿಸಿದೆ.

ಹಿರಿಯ ಐ.ಎ.ಎಸ್ ಅಧಿಕಾರಿ 58 ವರ್ಷದ ಸಂಜೀವ್ ಕುಮಾರ್ ಅವರು ಪ್ರಸ್ತುತ ಕರ್ನಾಟಕದ ಮುಖ್ಯ ಚುನಾವಣಾಧಿಕಾರಿಯಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಅವರು ಮೈಸೂರು ವಿಶ್ವವಿದ್ಯಾನಿಲಯದ **Development Studies** ವಿಭಾಗದ ಡಾ.ಶ್ರೀಜಯ್ ದೇವರಾಜ್ ಅರಸ್ ಅವರ ಮಾರ್ಗದರ್ಶನದಲ್ಲಿ

**“MGNREGA, Rights, Processes and Sustainble Livelihood: A Critical Study in Karnataka”** ಮಹಾಪ್ರಬಂಧವನ್ನು ಮಂಡಿಸಿದ್ದರು. ನಿನ್ನೆ ನಡೆದ ಮೈಸೂರು ವಿಶ್ವವಿದ್ಯಾನಿಲಯದ ನೂರನೇ ಘಟಿಕೋತ್ಸವದಲ್ಲಿ ಡಾಕ್ಟರೇಟ್ ಪದವಿ ಪ್ರಧಾನ ಮಾಡಲಾಯಿತು.

ಛಾಯಾಚಿತ್ರ ಲಗತ್ತಿಸಿದೆ)

## ಪೊಲೀಸ್ ಹುತಾತ್ಮರ ಗೌರವಾರ್ಥ ಭಾವಚಿತ್ರ ಪ್ರದರ್ಶನ

ಬೆಂಗಳೂರು, ಅಕ್ಟೋಬರ್ 20 (ಕರ್ನಾಟಕ ವಾರ್ತೆ): ಕರ್ನಾಟಕ ರಾಜ್ಯ ಪೊಲೀಸ್ ವತಿಯಿಂದ ಪೊಲೀಸ್ ಸಂಸ್ಮರಣಾ ದಿನಾಚರಣೆ ಅಂಗವಾಗಿ ಹುತಾತ್ಮರ ಗೌರವಾರ್ಥ ಭಾವಚಿತ್ರ ಪ್ರದರ್ಶನವನ್ನು ಅಕ್ಟೋಬರ್ 22 ರಿಂದ 25ರ ವರೆಗೆ ನಗರದ ಕುಮಾರ ಕೃಪಾ ರಸ್ತೆಯಲ್ಲಿರುವ ಕರ್ನಾಟಕ ಚಿತ್ರಕಲಾ ಪರಿಷತ್‌ನಲ್ಲಿ ಆಯೋಜಿಸಲಾಗಿದೆ.

ಈ ಕಾರ್ಯಕ್ರಮದ ಉದ್ಘಾಟನೆಯನ್ನು ಅಕ್ಟೋಬರ್ 22ರಂದು ಸಂಜೆ 4.00 ಗಂಟೆಗೆ ಗೃಹ ಸಚಿವ ಬಸವರಾಜ ಬೊಮ್ಮಾಯಿ ನೆರವೇರಿಸುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ವಸತಿ ಸಚಿವರ ಪ್ರವಾಸ

ಬೆಂಗಳೂರು, ಅಕ್ಟೋಬರ್ 20 (ಕರ್ನಾಟಕ ವಾರ್ತೆ): ವಸತಿ ಸಚಿವ ಹಾಗೂ ಕೊಡಗು ಜಿಲ್ಲಾ ಉಸ್ತುವಾರಿ ಸಚಿವ ವಿ. ಸೋಮಣ್ಣ ಅವರು ಅಕ್ಟೋಬರ್ 21 ರಂದು ತುಮಕೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಬಿ.ಕಾಂ 6ನೇ ಸೆಮಿಸ್ಟರ್ ಪರೀಕ್ಷಾ ಫಲಿತಾಂಶ ಪ್ರಕಟ

**ಬೆಂಗಳೂರು, ಅಕ್ಟೋಬರ್ 20 (ಕರ್ನಾಟಕ ವಾರ್ತೆ):** ಕರ್ನಾಟಕ ವಿಶ್ವವಿದ್ಯಾನಿಲಯವು ಸೆಪ್ಟೆಂಬರ್ 2020 ರಲ್ಲಿ ನಡೆಸಿದ ಬಿ.ಕಾಂ 6ನೇ ಸೆಮಿಸ್ಟರ್ ಪರೀಕ್ಷೆಯ ಫಲಿತಾಂಶಗಳನ್ನು ಪ್ರಕಟಿಸಲಾಗಿದೆ. ಜಾಲತಾಣ www.kud.ac.inm ನಲ್ಲಿ ಫಲಿತಾಂಶದ ವಿವರವನ್ನು ಪಡೆಯಬಹುದು ಎಂದು ಮೌಲ್ಯಮಾಪನ ಕುಲಸಚಿವರಾದ ಪ್ರೊ.ರವಿಂದ್ರನಾಥ ಎನ್.ಕದಮ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪಿಎಂ ಕಿಸಾನ್ ಕರ್ನಾಟಕ ಯೋಜನೆ
## ಸಹಾಯ ಧನ ಪಡೆಯಲು ಬ್ಯಾಂಕ್ ಖಾತೆಗೆ ಆಧಾರ್ ಜೋಡಣೆ

**ಬೆಂಗಳೂರು, ಅಕ್ಟೋಬರ್ 20 (ಕರ್ನಾಟಕ ವಾರ್ತೆ): ರೈತರು ರಾಜ್ಯ ಸರ್ಕಾರದಿಂದ ಪಿಎಂ ಕಿಸಾನ್ ಕರ್ನಾಟಕ ಯೋಜನೆಯಡಿ ವಾರ್ಷಿಕ 4 ಸಾವಿರ ರೂ.ಗಳ ಆರ್ಥಿಕ ನೆರವು ಪಡೆಯಲು ತಮ್ಮ ಆಧಾರ್ ಸಂಖ್ಯೆಯನ್ನು ತಮ್ಮ ಬ್ಯಾಂಕ್ ಖಾತೆಗೆ ಜೋಡಣೆ ಮಾಡಿಸುವಂತೆ ಕೃಷಿ ಇಲಾಖೆ ನಿರ್ದೇಶಕರು ತಿಳಿಸಿದ್ದಾರೆ.**

**ರೈತರು ಸರ್ಕಾರದ ಈ ಸಹಾಯ ಧನದ ನೆರವು ಸ್ಥಿತಿ ಪರಿಶೀಲಿಸಲು https://fruits.karnataka.gov.in/reports/FarmerPaymentDetails.aspx ವೆಬ್ ಲಿಂಕ್‌ನ್ನು ವೀಕ್ಷಿಸಿ ಹಾಗೂ ಬ್ಯಾಂಕ್ ಖಾತೆಗೆ ಸಂಬಂಧಿಸಿದ ಸಮಸ್ಯೆಯಿದ್ದಲ್ಲಿ ತಮ್ಮ ಬ್ಯಾಂಕ್ ಶಾಖೆಯನ್ನು ಸಂಪರ್ಕಿಸಿ ದಾಖಲೆಗಳನ್ನು ಸರಿಪಡಿಸಿಕೊಳ್ಳಲು ಕೋರಿದೆ.**

**ಛಾಯಾಚಿತ್ರ ಸುದ್ದಿ:**

**ಧಾರವಾಡದ ನಿಮಾನ್ಸ್ ಆಸ್ಪತ್ರೆಯು ಒಂದು ಲಕ್ಷ ಕೋವಿಡ್–19 ಟೆಸ್ಟ್‌ಗಳನ್ನು ಯಶಸ್ವಿಯಾಗಿ ನಿರ್ವಹಿಸಿದ ಹಿನ್ನಲೆಯಲ್ಲಿ ರಾಜ್ಯ ಕೋವಿಡ್–19 ಟೆಸ್ಟ್ ಉಸ್ತುವಾರಿ ಅಧಿಕಾರಿ ಶ್ರೀಮತಿ ಶಾಲಿನಿ ರಜನೀಶ್ ಅವರು ಪ್ರಯೋಗಾಲಯಕ್ಕೆ ಬೇಟಿ ನೀಡಿ ಈ ಸಾಧನೆಯಲ್ಲಿ ಕಾರ್ಯನಿರ್ವಹಿಸದ ಎಲ್ಲರಿಗೂ ಶುಭಾಶಯಗಳನ್ನು ತಿಳಿಸಿದರು.**

Doctorate of Letters” (D.Litt) Award to Manoj Rajan

Bengaluru, 20 Oct (Karnataka Information):The University of Mysore has Awarded “Doctorate of Letters” (D.Litt) for the thesis Agricultural Market Reforms in the Country and the Role of Technology to Manoj Rajan, Commissioner, KSDMA. The study focuses on agricultural markets in the Country, various market regulations, salient provisions of the Act. Agricultural Marketing is confronted with several intricate problems severely affecting the economic conditions of the farming community in the Country. The study identifies critical areas of reforms in the Karnataka model and elaborates on the new market structure and changes seen in market behaviour post online markets. The paper offers recommendations on building a robust agricultural marketing system in the Country.

**ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿಗೆ ಅರ್ಹ ವ್ಯಕ್ತಿಯನ್ನು ಆಯ್ಕೆ ಮಾಡಲು ಸಮಿತಿ ರಚನೆ**

**ಬೆಂಗಳೂರು, ಅಕ್ಟೋಬರ್ 20 (ಕರ್ನಾಟಕ ವಾರ್ತೆ):**

**2020-21 ನೇ ಸಾಲಿನ ಶ್ರೀ ಮಹರ್ಷಿ ವಾಲ್ಮೀಕಿ ಇವರ ಸ್ಮರಣಾರ್ಥ ರಾಜ್ಯ ಸರ್ಕಾರ ನೀಡುವ ಶ್ರೀ ಮಹರ್ಷಿ ವಾಲ್ಮೀಕಿ ಪ್ರಶಸ್ತಿಗೆ ಅರ್ಹ ವ್ಯಕ್ತಿಯನ್ನು ಆಯ್ಕೆ ಮಾಡುವ ಸಂಬಂಧ, ಪ್ರೊ. ಟಿ.ವಿ. ಕಟ್ಟಿಮನಿ (ಕುಲಪತಿಗಳು, ಸೆಂಟ್ರಲ್ ಟ್ರೈಬಲ್ ವಿ.ವಿ. ಆಂಧ್ರಪ್ರದೇಶ) ಇವರನ್ನು ಅಧ್ಯಕ್ಷರನ್ನಾಗಿ ನೇಮಕ ಮಾಡಲಾಗಿದೆ.**

**ಬೆಂಗಳೂರು ವಿಶ್ವವಿದ್ಯಾಲಯದ ನಿವೃತ್ತ ಪ್ರೊಫೆಸರ್ ಪ್ರೊ ಎಲ್. ಗೋಮತಿದೇವಿ, ಸಮಾಜ ಕಲ್ಯಾಣ ಇಲಾಖೆಯ ನಿವೃತ್ತ ಅಪರ ನಿರ್ದೇಶಕರಾದ ಕೆ.ಎಸ್. ಮೃತ್ಯುಂಜಯ, ರಾಯಚೂರಿನ ನಿವೃತ್ತ ಸರ್ಕಾರಿ ವೈದ್ಯರಾದ ಡಾ: ಪ್ರಭು ಎಸ್. ಹುಲಿನಾಯಕ್, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳುರು ಇದರ ನಿರ್ದೇಶಕರು, ಕರ್ನಾಟಕ ಶ್ರೀ ಮಹರ್ಷಿ ವಾಲ್ಮೀಕಿ ಪರಿಶಿಷ್ಟ**

ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕರು ಸದಸ್ಯರುಗಳಾಗಿದ್ದು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ ಉಪ ನಿರ್ದೇಶಕರು ಸದಸ್ಯ ಕಾರ್ಯದರ್ಶಿಗಳಾಗಿರುತ್ತಾರೆಂದು ಅಧಿಕೃತ ಪ್ರಕಟಣೆ ತಿಳಿಸಿದೆ.